ಜಗದೋದ್ಧಾರನ ಆಡಿಸಿದಳೆಶೋದಾ
ಜಗದೋದ್ಧಾರನ ॥ ಪ ॥

ಜಗದೋದ್ಧಾರನ ಮಗನೆಂದು ತಿಳಿಯುತ
ಸುಗುಣಾಂತ ರಂಗನ ಆಡಿಸಿದಳೆಶೋದಾ ॥ ಅಪ ॥

ನಿಗಮಕೆ ಸಿಲುಕದ ಅಗಣಿತ ಮಹಿಮನ
ಮಗುಗಳ ಮಾಣಿಕ್ಯನ ಆಡಿಸಿದಳೆಶೋದಾ ॥ ೧ ॥

ಅಣೋರಣೀಯನ ಮಹತೋ ಮಹೀಮನ
ಅಪ್ರಮೇಯನ ಆಡಿಸಿದಳೆಶೋದಾ ॥ ೨ ॥

ಪರಮ ಪುರುಶನ ಪರವಾಸುದೇವನ
ಪುರಂದರ ವಿಠಲನ ಆಡಿಸಿದಳೆಶೋದಾ ॥ ೩ ॥